# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿ12(5)ಪಿಆರ್/ 62 /2020-21

ಆಯುಕ್ತರವರ ಕಛೇರಿ,
ಬೃಹತ್ ಮಹಾನಗರ ಪಾಲಿಕೆ ಕಛೇರಿಗಳು,
ಬೆಂಗಳೂರು, ದಿನಾಂಕ: 13.05.20

## ಸುತ್ತೋಲೆ

ವಿಷಯ: ನಾಲ್ಕನೇ ದರ್ಜೆ ನೌಕರರುಗಳು ಕಡ್ಡಾಯವಾಗಿ ಸಮವಸ್ತ್ರ ಮತ್ತು ಗುರುತಿನ ಚೀಟಿಯನ್ನು ಧರಿಸುವ ಬಗ್ಗೆ.

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಕೇಂದ್ರ ಕಛೇರಿ ಮತ್ತು 8 ವಲಯಗಳ ಕಛೇರಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನಾಲ್ಕನೇ ದರ್ಜೆ ನೌಕರರುಗಳು {ಜವಾನರು, ಪೌರಕಾರ್ಮಿಕರು, ಗ್ಯಾಂಗ್‌ಮೆನ್, ತೋಟಗಾರಿಕೆ ಮಾಲಿ, ಎ.ಎಲ್.ಓ. ಗ್ಯಾಂಗ್‌ಮೆನ್, ಎಂ.ಸಿ. ಗ್ಯಾಂಗ್‌ಮೆನ್, ಸೈನೋಗ್ಯಾಸ್ ಗ್ಯಾಂಗ್‌ಮೆನ್, ಗ್ಯಾಂಗ್‌ಮೆನ್, ಸ್ಯಾನಿಟರಿ ದಫೇದಾರ್ ಮತ್ತು ಇನ್ನಿತರೇ ಗ್ರೂಪ್ ಡಿ ನೌಕರರುಗಳು} ಸಮವಸ್ತ್ರ ಮತ್ತು ಗುರುತಿನ ಚೀಟಿಯನ್ನು ಕಡ್ಡಾಯವಾಗಿ ಧರಿಸಬೇಕೆಂದು ಆಯುಕ್ತರ ಕಛೇರಿಯ ಆಡಳಿತ ಶಾಖೆಯಲ್ಲಿ ಹಲವಾರು ಸುತ್ತೋಲೆಗಳನ್ನು ಹೊರಡಿಸಿದ್ದರೂ ಸಹ ಸಮವಸ್ತ್ರ ಮತ್ತು ಗುರುತಿನ ಚೀಟಿಗಳನ್ನು ಧರಿಸದೇ ಇರುವುದನ್ನು ಗಮನಿಸಲಾಗಿರುತ್ತದೆ.

ಆದ್ದರಿಂದ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಗ್ರೂಪ್ ಡಿ ನೌಕರರುಗಳು ಕಡ್ಡಾಯವಾಗಿ ಸಮವಸ್ತ್ರ ಮತ್ತು ಗುರುತಿನ ಚೀಟಿ ಧರಿಸಬೇಕೆಂದು ಈ ಸುತ್ತೋಲೆ ಮೂಲಕ ಮತ್ತೊಮ್ಮೆ ಸೂಚಿಸಿದೆ. ತಪ್ಪಿದ್ದಲ್ಲಿ ಸಮವಸ್ತ್ರ ಮತ್ತು ಗುರುತಿನ ಚೀಟಿ ಧರಿಸದೇ ಇರುವಂತಹ ನಾಲ್ಕನೇ ದರ್ಜೆ ನೌಕರರುಗಳಿಗೆ ನೀಡಿರುವ ಸಮವಸ್ತ್ರ ಭತ್ಯೆಯನ್ನು ಕಡಿತಗೊಳಿಸಲು ಎಲ್ಲಾ ಬಟವಾಡೆ ಅಧಿಕಾರಿಗಳಿಗೆ ಸೂಚಿಸಿದೆ.

ವಿಶೇಷ ಆಯುಕ್ತರು
Special Commissioner (Admin)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
Bruhat Bangalore Mahanagara Palike

ಪ್ರತಿಯನ್ನು: ಪೂಜ್ಯ ಮಹಾಪೌರರ ಅವಗಾಹನೆಗೆ ತರಲು ಆಪ್ತಕಾರ್ಯದರ್ಶಿ ರವರಿಗೆ ಕಳುಹಿಸಿದೆ.
: ಮಾನ್ಯ ಉಪ ಮಹಾಪೌರರ ಅವಗಾಹನೆಗೆ ತರಲು ಆಪ್ತಕಾರ್ಯದರ್ಶಿ ರವರಿಗೆ ಕಳುಹಿಸಿದೆ.
: ಮಾನ್ಯ ಆಯುಕ್ತರು/ವಿಶೇಷ ಆಯುಕ್ತರು (ಯೋಜನೆ/ಹಣಕಾಸು) ರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಕಳುಹಿಸಿದೆ.
: ಉಪ ಆಯುಕ್ತರು (ಆಡಳಿತ) ರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಕಳುಹಿಸಿದೆ.
: ಕೌನ್ಸಿಲ್ ಕಾರ್ಯದರ್ಶಿರವರಿಗೆ ಕಳುಹಿಸುತ್ತಾ, ಎಲ್ಲಾ ಸ್ಥಾಯಿ ಸಮಿತಿಯ ಅಧ್ಯಕ್ಷರುಗಳಿಗೆ, ಆಡಳಿತ ಪಕ್ಷದ ನಾಯಕರು, ವಿರೋಧ ಪಕ್ಷದ ನಾಯಕರುಗಳಿಗೆ ಕಳುಹಿಸಿಕೊಡಲು ಕೋರಿದೆ.
: ಎಲ್ಲಾ ಅಪರ / ಜಂಟಿ ಆಯುಕ್ತರುಗಳಿಗೆ ಕಳುಹಿಸಿದೆ.
: ಎಲ್ಲಾ ಇಲಾಖಾ ಮುಖ್ಯಸ್ಥರು / ಬಟವಾಟೆ ಅಧಿಕಾರಿಗಳಿಗೆ ಸೂಚಿಸಿದೆ.
: ಸಾರ್ವಜನಿಕ ಸಂಪರ್ಕಾಧಿಕಾರಿ ರವರಿಗೆ ಮಾಹಿತಿಗೆ ಹಾಗೂ ಅಗತ್ಯಕ್ರಮಕ್ಕಾಗಿ ಕಳುಹಿಸಿದೆ.
: ಮಾಹಿತಿ ಮತ್ತು ತಂತ್ರಜ್ಞಾನ ಸಲಹೆಗಾರರಿಗೆ ಕಳುಹಿಸುತ್ತಾ, ಪಾಲಿಕೆಯ ವೆಬ್‌ಸೈಟ್‌ನಲ್ಲಿ ಅಳವಡಿಸಲು ಸೂಚಿಸಿದೆ.
: ಕಛೇರಿ ಪ್ರತಿ.